ಆ) ಭಾಲ್ಕಿ ಕ್ಷೇತ್ರದಿಂದ ಬಂದಿರುವ ಮನವಿಗಳನ್ನು ಪರಿಗಣಿಸಿ ಹೊಸ ಸರ್ಕಾರಿ ಮಾಧ್ಯಮಿಕ ಶಾಲೆಗಳನ್ನು ಈ ವರ್ಷದಲ್ಲಿ ಸ್ಥಾಪಿಸಲಾಗುವುದೇ;

ಇ) ಇಲ್ಲದಿದ್ದರೆ ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಭಾಲ್ಕಿ ವಿಧಾನ ಸಭಾ ಕ್ಷೇತ್ರದಲ್ಲಿ 19 ಸರ್ಕಾರಿ ಪ್ರೌಢಶಾಲೆಗಳಿವೆ.

ಆ) ಮತ್ತು ಇ)

2004–2005ನೇ ಸಾಲಿಗೆ 400 ಹೊಸ ಸರ್ಕಾರಿ ಪ್ರೌಢಶಾಲೆಗಳ ಮಂಜೂರಾತಿಗೆ ಪ್ರಸ್ತಾವನೆ ಬಂದಿದ್ದು, ಅದು ಸರ್ಕಾರದ ಪರಿಶೀಲನೆಯಲ್ಲಿದೆ.

...

387 (436) : ಶ್ರೀ ರಘುಪತಿ ಭಟ್ ಕೆ. (ಉಡುಪಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಲ್ಲಿರುವ ಹಿಂದುಳಿದ ವರ್ಗ–ಪಂಗಡಗಳ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು;

ಆ) ಪ್ರತಿ ವಸತಿ ನಿಲಯಗಳಿಗೆ ಮಂಜೂರಾಗಿರುವ ವಿದ್ಯಾರ್ಥಿಗಳ ಮಿತಿ ಎಷ್ಟು;

ಇ) ಉಡುಪಿ ತಾಲ್ಲೂಕಿನ ವಸತಿ ನಿಲಯಗಳಲ್ಲಿ ಸೇರ್ಪಡೆಗಾಗಿ ತೀವ್ರ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಪ್ರತಿ ವಸತಿ ನಿಲಯಗಳಿಗೆ ಚಾಲ್ತಿ ಸಾಲಿಗೆ 25 ಸೀಟುಗಳನ್ನು ಹೆಚ್ಚುವರಿ ಮಾಡುವ ಅವಕಾಶ ಇದೆಯೇ;

ಉ) ಎಸ್‌ಸಿ:ಎಸ್‌ಟಿ ವಿದ್ಯಾರ್ಥಿ ನಿಲಯಗಳಲ್ಲಿ 75/25 ಶೇಕಡಾ ಹಂಚಿಕೆಯಲ್ಲಿ ಶೇಕಡಾ 75ರಲ್ಲಿ ಭರ್ತಿಯಾಗದೇ ಇರುವ ಸೀಟುಗಳನ್ನು ಇತರೆ ವರ್ಗದವರಿಗೆ ಸೇರಲು ಅವಕಾಶ ಇದೆಯೇ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಉಡುಪಿ ಜಿಲ್ಲೆಯಲ್ಲಿ ಒಟ್ಟು 27 ವಿದ್ಯಾರ್ಥಿ ನಿಲಯಗಳಿದ್ದು ಇವುಗಳಲ್ಲಿ 18 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು ಹಾಗೂ 9 ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.

ಆ) ಹಾಲಿ ಇರುವ ಪ್ರತಿ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆ ಕನಿಷ್ಠ 50 ರಿಂದ 75 ರವರೆಗೆ ಇರುತ್ತದೆ.

ಇ) ಹೌದು.

ಈ) ವಿದ್ಯಾರ್ಥಿಗಳ ಸಂಖ್ಯಾಬಲ ಹೆಚ್ಚಿಸುವುದು ಹಣಕಾಸಿನ ಲಭ್ಯತೆಯನ್ನು ಮತ್ತು ವಸತಿ ನಿಲಯದಲ್ಲಿನ ವಾಸ್ತವ್ಯಕ್ಕೆ ಲಭ್ಯವಿರುವ ಸಾಮರ್ಥ್ಯವನ್ನು ಅವಲಂಬಿಸಿರುತ್ತದೆ.

ಉ) ಇಲ್ಲ. ಪರಿಶಿಷ್ಟ ಜಾತಿಯ ವಿದ್ಯಾರ್ಥಿ ನಿಲಯಗಳಲ್ಲಿ ಶೇ. 75 ಸ್ಥಾನವನ್ನು ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಮೀಸಲಾಗಿಡಲಾಗಿದೆ. ಉಳಿದ ಶೇ. 25 ಸ್ಥಾನವನ್ನು ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಮೀಸಲಿಡಲಾಗಿದೆ. ಚಾಲ್ತಿಯಲ್ಲಿರುವ ವ್ಯವಸ್ಥೆಯನ್ನು ಸಡಿಲಗೊಳಿಸುವುದು ಪರಿಗಣನೆಯಲ್ಲಿರುವುದಿಲ್ಲ.